# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 25.01.2021ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2021ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

**ಪ್ರಾರಂಭಿಕ**

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು. ಸಭೆಯನ್ನು ಮುಂದುವರಿಸುವಂತೆ ಕುಲಪತಿಗಳನ್ನು ವಿನಂತಿಸಿದರು.

## I. ನಡವಳಿಗಳ ದೃಢೀಕರಣ

1. ದಿನಾಂಕ 30.12.2020ರಂದು ನಡೆದ 2020ನೇ ಸಾಲಿನ **ನಾಲ್ಕನೇ ವಿಶೇಷ ಸಭೆಯ** ನಡವಳಿಯ ದೃಢೀಕರಣ.

   **–ದೃಢೀಕರಿಸಲಾಯಿತು.–**

## II. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 12.11.2020ರಂದು ನಡೆದ **ಸಿಂಡಿಕೇಟಿನ 2020ನೇ ಸಾಲಿನ ಏಳನೇ ಸಾಮಾನ್ಯ ಸಭೆಯ** ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

   – ಅನುಮೋದಿಸಲಾಯಿತು.–

2. ದಿನಾಂಕ 17.12.2020ರಂದು ನಡೆದ **ಸಿಂಡಿಕೇಟಿನ 2020ನೇ ಸಾಲಿನ ಎಂಟನೇ ಸಾಮಾನ್ಯ ಸಭೆಯ** ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

ಅನುಸರಣಾ ವರದಿಯಲ್ಲಿ ಈ ಕೆಳಗಿನ ವರದಿಗಳು ಅಪೂರ್ಣವಾಗಿದ್ದು, ವಿಸ್ತೃತ ವರದಿಯನ್ನು ನೀಡುವಂತೆ ಸಿಂಡಿಕೇಟು ಸೂಚಿಸಿತು.

1. ಕ್ರಮಸಂಖ್ಯೆ 18ರ ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ ಸಾ.ಸ.8:18(2020)
2. ಕ್ರಮಸಂಖ್ಯೆ 24ರ ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ ಸಾ.ಸ.8:24(2020)
3. ಕ್ರಮಸಂಖ್ಯೆ 40ರ ಇತರ ವಿಷಯಗಳು – 3
4. ಕ್ರಮಸಂಖ್ಯೆ 48ರ ಇತರ ವಿಷಯಗಳು – 11
5. ಕ್ರಮಸಂಖ್ಯೆ 53ರ ಇತರ ವಿಷಯಗಳು – 16

## III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ/ಸಾ.ಸ.1:01(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ನೂತನ ನೀರು ಸರಬರಾಜು ಟ್ಯಾಂಕರನ್ನು ಹೊಂದಿರುವ ವಾಹನ (Vehicle mounted water tank) ವನ್ನು ಖರೀದಿಸುವ ಬಗ್ಗೆ

(ಹೆಚ್ಚುವರಿ ಮಾಹಿತಿ)

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಒದಗಿಸಿರುವ ತುಲನಾತ್ಮಕ ದರಪಟ್ಟಿಗಳನ್ನು ಪರಿಶೀಲಿಸಲಾಗಿ ಕ್ರಮ ಸಂಖ್ಯೆ 2Aಯಲ್ಲಿ ನಮೂದಿಸಿರುವ 44HP (Medium capacity) - 4 wheel ಮಾದರಿಯ ವೆಚ್ಚ ರೂ.11.90ಲಕ್ಷಗಳ ಮಹೀಂದ್ರ ಟ್ರಾಕ್ಟರ್ ವಾಹನವನ್ನು ಆಯ್ಕೆ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.1:02(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರಕ್ಕೆ ಹಾಗೂ ವಿಶ್ವವಿದ್ಯಾನಿಲಯ "ಜ್ಞಾನ ಕಾವೇರಿ" ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರಕ್ಕೆ ಆಂಬ್ಯುಲೆನ್ಸ್ ವಾಹನವನ್ನು ಖರೀದಿಸುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯ "ಜ್ಞಾನ ಕಾವೇರಿ" ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರಕ್ಕೆ ಓಮ್ನಿ ಮಾದರಿಯ ಒಂದು ಆಂಬ್ಯುಲೆನ್ಸ್ ವಾಹನವನ್ನು ಖರೀದಿಸುವ ಪ್ರಸ್ತಾವನೆಯನ್ನು ಸಿಂಡಿಕೇಟು ಅನುಮೋದಿಸಿತು.

ಮಂಗಳೂರು ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರಕ್ಕೆ ಆಂಬ್ಯುಲೆನ್ಸ್ ವಾಹನವನ್ನು ಖರೀದಿಸುವ ಪ್ರಸ್ತಾವನೆಗೆ ಸಂಬಂಧಿಸಿ ಸಿಂಡಿಕೇಟು ಈ ಕೆಳಗಿನ ನಿರ್ಣಯವನ್ನು ಕೈಗೊಂಡಿತು.

1) ವಿಶ್ವವಿದ್ಯಾನಿಲಯದ ಸಮೀಪದ ಮೂರು ಆಸ್ಪತ್ರೆಗಳೊಂದಿಗೆ ಚರ್ಚಿಸಿ, ವಿಶ್ವವಿದ್ಯಾನಿಲಯದ ಆವರಣದಲ್ಲಿ ಒಂದು ಆಂಬ್ಯುಲೆನ್ಸ್ ಸೇವೆಯನ್ನು 24x7 ದಿನಗಳಿಗೆ ಲಭ್ಯವಿರುವಂತೆ ಒಡಂಬಂಡಿಕೆ ಮಾಡಿಕೊಳ್ಳುವುದು.
2) ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿರುವ ಬ್ಯಾಂಕ್‌ಗಳ ಸಹಭಾಗಿತ್ವದಲ್ಲಿ CSR fund ನಿಂದ ಆಂಬ್ಯುಲೆನ್ಸ್ ಸೇವೆಯನ್ನು ಬಳಸಿಕೊಳ್ಳುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:03(2021)

**ವಿಷಯ:** ತಾತ್ಕಾಲಿಕ ನೆಲೆಯಲ್ಲಿ ಸಿಬ್ಬಂದಿಗಳ ಸೇವೆಯನ್ನು ಬಳಸಿಕೊಳ್ಳಲು ಅನುಮತಿ ನೀಡಿ ಸಂಭಾವನೆ ನಿಗದಿಪಡಿಸಿದ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

ಮುಂದುವರಿದು, ಈ ಸಿಬ್ಬಂದಿಗಳ ವೇತನ ಮರು ನಿಗದಿಪಡಿಸುವ ಬಗ್ಗೆ ಇತರ ವಿಶ್ವವಿದ್ಯಾನಿಲಯಗಳು, ಸರ್ಕಾರಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ತಾತ್ಕಾಲಿಕ ನೆಲೆಯ ಸಿಬ್ಬಂದಿಗಳ ವೇತನಗಳ ಬಗ್ಗೆ ಮಾಹಿತಿ ಸಂಗ್ರಹಿಸಿಕೊಂಡು ಈ ಕೆಳಕಂಡ ಸಿಂಡಿಕೇಟಿನ ಉಪಸಮಿತಿಗೆ ಮಂಡಿಸಿ ಮುಂದಿನ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಸಮಿತಿಯ ವರದಿಯನ್ನು ಒಂದು ತಿಂಗಳ ಒಳಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.

1. ಪ್ರೊ. ಎಂ.ಎಸ್. ತಳವಾರ್, ಅಧ್ಯಕ್ಷರು

ಸಿಂಡಿಕೇಟು ಸದಸ್ಯರು

2. ಶ್ರೀ ಮೋಹನ್ ಪಡಿವಾಳ್ — ಸದಸ್ಯರು
ಸಿಂಡಿಕೇಟು ಸದಸ್ಯರು

3. ಶ್ರೀ ರವಿಚಂದ್ರ ಪಿ. ಎಂ. — ಸದಸ್ಯರು
ಸಿಂಡಿಕೇಟು ಸದಸ್ಯರು

4. ಕಾರ್ಯದರ್ಶಿ, — ಸದಸ್ಯರು
ಮಂಗಳೂರು ವಿಶ್ವವಿದ್ಯಾನಿಲಯ ಶಿಕ್ಷಕೇತರ ಉದ್ಯೋಗಿಗಳ ಸಂಘ

5. ಶ್ರೀ ಚಂದ್ರು ಹೆಗಡೆ — ಸದಸ್ಯ ಸಂಚಾಲಕರು
ವಿಶೇಷಾಧಿಕಾರಿ, ಕುಲಸಚಿವರ ಕಛೇರಿ

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:04(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ., ಬಯೋಮೆಟ್ರಿಕ್ ಹಾಗೂ ಸೋಲಾರ್ ಉಪಕರಣಗಳ ಪ್ರಕ್ರಿಯೆ ಮತ್ತು ಕಾರ್ಯಕ್ಷಮತೆ ಬಗ್ಗೆ ಆಂತರಿಕ ಪರಿಶೀಲನಾ ಸಮಿತಿಯು ಸಲ್ಲಿಸಿದ ವರದಿ ಮತ್ತು ಕಾನೂನು ಅಭಿಪ್ರಾಯದ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಈ ಬಗ್ಗೆ ನ್ಯಾಯವಾದಿಗಳು ನೀಡಿರುವ ಕಾನೂನು ಅಭಿಪ್ರಾಯದಂತೆ ಪ್ರಕರಣದ ಸಮಗ್ರ ವರದಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಘನತೆವೆತ್ತ ರಾಜ್ಯಪಾಲರ ಕಚೇರಿಗೆ ಕಳುಹಿಸಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ/ಸಾ.ಸ.1:05(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ನಿರ್ವಹಿಸಲ್ಪಟ್ಟ ತುಂಡು ಕಾಮಗಾರಿಗಳ (Piece work agreement) ನಿರ್ವಹಣಾ ಮೊತ್ತಕ್ಕೆ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ದಿನಾಂಕ 09.12.2020ರ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಸರ್ಕಾರದ ನಿರ್ದೇಶನದಂತೆ ಇನ್ನು ಮುಂದಕ್ಕೆ ಯಾವುದೇ ತುಂಡು ಕಾಮಗಾರಿ (Piece work agreement)ಗಳನ್ನು ನಿರ್ವಹಿಸಬಾರದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ/ಸಾ.ಸ.1:06(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ Food court ನಿರ್ಮಾಣಕ್ಕಾಗಿ ಮಂಗಳ ಕ್ಯಾಂಟೀನ್‌ನ ಹಿಂಭಾಗದಲ್ಲಿ ವಿಸ್ತರಣಾ ಕಾಮಗಾರಿ – ಅಂದಾಜುಪಟ್ಟಿ ಅನುಮೋದನೆ ಬಗ್ಗೆ (ಹೆಚ್ಚುವರಿ ಮಾಹಿತಿ ನೀಡುವ ಬಗ್ಗೆ).

**ನಿರ್ಣಯ:** ಪ್ರಸ್ತಾವನೆಯಲ್ಲಿ ನಮೂದಿಸಿರುವ ಮೇಲ್ಛಾವಣಿಗಳಿಗೆ ಮುಂದುವರಿಕೆಯಾಗಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಆಧುನಿಕ ನಮೂನೆಯ Onduline roofing sheet ಬಗ್ಗೆ ಮಾಹಿತಿ ಪಡೆದುಕೊಂಡ ಬಳಿಕ ಸೂಕ್ತವಾದ ಮೇಲ್ಛಾವಣಿ ಅಳವಡಿಸಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ/ಸಾ.ಸ.1:07(2021)

**ವಿಷಯ:** Construction of Botany Block at Mangalore University Campus, Mangalagangothri-ಹೆಚ್ಚುವರಿ ಪರಿಮಾಣ ಹಾಗೂ ಹೆಚ್ಚುವರಿ ಐಟಂ ಮೊತ್ತ (Excess Quantity – (Work Slip) & E.I.R.L.) – ಅನುಮೋದನೆಯ ಬಗ್ಗೆ

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪಿಎಂಇಬಿ/ಸಾ.ಸ.1:08(2021)

**ವಿಷಯ:** ರೂಸಾ ಅನುದಾನದಡಿಯಿಂದ ಉಪಕರಣಗಳ ಖರೀದಿ ಬಗ್ಗೆ

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:09(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ನೆಲೆಯಲ್ಲಿ ಕರ್ತವ್ಯ ನಿರ್ವಹಿಸಿ ಸಿಂಡಿಕೇಟು ನಿರ್ಣಯದಂತೆ ಖಾಯಂಗೊಳಿಸಲಾದ 04 ಮಂದಿ ವಾಹನ ಚಾಲಕರ ವೇತನ ಪಾವತಿ ಬಗ್ಗೆ.

**ನಿರ್ಣಯ:** ಸದರಿ ಸಿಬ್ಬಂದಿಗಳನ್ನು ತಾತ್ಕಾಲಿಕ ಸಿಬ್ಬಂದಿಗಳೆಂದು ಪರಿಗಣಿಸಿ, ಪ್ರಸ್ತುತ ಪಾವತಿಸುತ್ತಿರುವ ವೇತನವನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳಿಂದ ಭರಿಸಿ, ಯಥಾಸ್ಥಿತಿಯನ್ನು ಕಾಪಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:10(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಗ್ರಂಥಾಲಯದಲ್ಲಿ ಅನುಚರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಕೆ. ಗಣೇಶ್ ಶೆಟ್ಟಿ ಇವರು ನಿಧನರಾದುದರಿಂದ ಇವರ ಪತ್ನಿ ಶ್ರೀಮತಿ ಆನಂದಿ ಶೆಟ್ಟಿ ಇವರಿಗೆ ವಿಶ್ವವಿದ್ಯಾನಿಲಯದಲ್ಲಿ ಅನುಕಂಪದ ಆಧಾರದಲ್ಲಿ ಉದ್ಯೋಗ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:11(2021)

**ವಿಷಯ:** ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿನ ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ನೇಮಕಗೊಂಡಿರುವ ಶ್ರೀಮತಿ ಗೀತಾಂಜಲಿ ಪಿ.ಎ. ಇವರ ನೇಮಕಾತಿಯನ್ನು ರದ್ದುಗೊಳಿಸುವಂತೆ ಮತ್ತು ಸದರಿ ಹುದ್ದೆಗೆದುರಾಗಿ ತಮ್ಮನ್ನು ನೇಮಕಗೊಳಿಸುವಂತೆ ಕೋರಿ ಡಾ.ಗೌತಮ್ ಎಸ್.ಎ. ಇವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಹೂಡಿದ ರಿಟ್ ಅರ್ಜಿ ಸಂಖ್ಯೆ: 1652/2015 (ಎಸ್–ಆರ್‌ಇಎಸ್)ಗೆ ಸಂಬಂಧಿಸಿದಂತೆ ದಿನಾಂಕ 24.11.2020ರಂದು ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ವಿರುದ್ಧ ಡಾ. ಗೀತಾಂಜಲಿ ಪಿ.ಎ. ಇವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಹೂಡಿರುವ ಅಪೀಲು ಸಂಖ್ಯೆ 751/2020ಗೆ ಸಂಬಂಧಿಸಿ ನ್ಯಾಯಾಲಯವು ಹೊರಡಿಸಿರುವ ಮಧ್ಯಂತರ ಆದೇಶದ ಬಗ್ಗೆ.

**ನಿರ್ಣಯ:** ಯಥಾಸ್ಥಿತಿಯನ್ನು ಕಾಪಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.1:12(2021)

**ವಿಷಯ:** ಪದವಿ ಮಟ್ಟದ ಇಂಗ್ಲೀಷ್ ಭಾಷಾ ವಿಷಯದ ಪಠ್ಯಕ್ರಮದ ಬಗ್ಗೆ ಶ್ರೀವರ್ಮ ಅಜ್ರಿ ಎಂ., ಮಾಜಿ ಸಿಂಡಿಕೇಟು ಸದಸ್ಯರ ಪ್ರಸ್ತಾವನೆ ಬಗ್ಗೆ

**ನಿರ್ಣಯ:** ಈ ಬಗ್ಗೆ ಯಥಾಸ್ಥಿತಿಯನ್ನು ಕಾಪಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.1:13(2021)

**ವಿಷಯ:** ಕಪ್ಪಂದಕರ್ಯ ಕುಪ್ಪಣ್ಣ ತುಂಬೆಕ್ಕ ಪ್ರತಿಷ್ಠಾನದ ವತಿಯಿಂದ ನಗದು ಬಹುಮಾನ ನೀಡುವ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಚಾಲ್ತಿಯಲ್ಲಿರುವ STATUTE GOVERNING ESTABLISHMENT OF FELLOWSHIPS, SCHOLARSHIPS, GOLD MEDALS ETC. ನ ಮಾಹಿತಿಯನ್ನು ಸಂಬಂಧಪಟ್ಟವರಿಗೆ ನೀಡಿ ಸದರಿ ಪರಿನಿಯಮದನುಸಾರ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.1:14(2021)

**ವಿಷಯ:** ದಿನಾಂಕ 01.01.2006 ರಿಂದ ಜಾರಿಗೊಂಡ ಪರಿಷ್ಕೃತ ಯು.ಜಿ.ಸಿ. ವೇತನ ಶ್ರೇಣಿಗೆ ಸಂಬಂಧಿಸಿದ ಅನುಶಾಸನದ ಕೆರಿಯರ್ ಎಡ್ವಾನ್ಸ್‌ಮೆಂಟ್ ಸ್ಕೀಂ ಪ್ರಕಾರ ವಿಶ್ವವಿದ್ಯಾನಿಲಯ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ – ಸ್ಕ್ರೀನಿಂಗ್–ಕಂ–ಇವ್ಯಾಲ್ಯುವೇಶನ್ / ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಪರಿಶೀಲಿಸಲಾಯಿತು. ಈ ಬಗ್ಗೆ ಸರ್ಕಾರದ ಪತ್ರ ಕ್ರಮಾಂಕ: ಇಡಿ 7 ಯುಡಿವಿ 2019 ದಿನಾಂಕ 07.03.2020ರಲ್ಲಿ ತಿಳಿಸಿರುವಂತೆ, ಯುಜಿಸಿ ನಿಯಮಾನುಸಾರ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ಪರಿನಿಯಮದಂತೆ, ಪದೋನ್ನತಿ ನೀಡಬಹುದೆಂಬುದಾಗಿ ನಿರ್ಣಯಿಸಿ, ಕೆರಿಯರ್ ಎಡ್ವಾನ್ಸ್‌ಮೆಂಟ್ ಸ್ಕೀಂ ಪ್ರಕಾರ ವಿಶ್ವವಿದ್ಯಾನಿಲಯ/ ಸ್ನಾತಕೋತ್ತರ ಕೇಂದ್ರ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ– ಸ್ಕ್ರೀನಿಂಗ್–ಕಂ–ಇವ್ಯಾಲ್ಯುವೇಶನ್ ಸಮಿತಿ/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.1:15(2021)

**ವಿಷಯ:** ಸೆಪ್ಟೆಂಬರ್ 2020ರ ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್ ಪದವಿ ಪರೀಕ್ಷೆಗಳ ಗಣಕೀಕರಣದ ಫಲಿತಾಂಶ ಪ್ರಕ್ರಿಯೆಯ ದರ ನಿಗದಿ ಬಗ್ಗೆ

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.1:16(2021)

**ವಿಷಯ:** ಶ್ರೀ ಹರೀಶ್ ಶೆಟ್ಟಿ, ಆಯ್ಕೆ ಶ್ರೇಣಿ ಉಪನ್ಯಾಸಕರು, ಕರ್ನಾಟಕ ಮಹಿಳಾ ಪಾಲಿಟೆಕ್ನಿಕ್, ಕೆ.ಪಿ.ಟಿ., ಮಂಗಳೂರು ಇವರು ಅಭಿವೃದ್ಧಿ ಪಡಿಸಿದ ಸಾಫ್ಟ್‌ವೇರ್ ಬಳಸಿ ಪರೀಕ್ಷಾ

|  |  |
|---|---|
|  | ಗಣಕೀಕರಣವನ್ನು ನಿರ್ವಹಿಸುವ ಪ್ರಸ್ತಾವನೆಯ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.<br>ಸದರಿ ಓಪನ್ ಸಾಫ್ಟ್‌ವೇರ್‌ನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶೀಘ್ರ ಅನುಷ್ಠಾನಕ್ಕೆ ತಂದು ಒಂದು ಸೆಮೆಸ್ಟರ್‌ನ ಪರೀಕ್ಷಾ ಕಾರ್ಯದ ಕಾರ್ಯವೈಖರಿಯನ್ನು ಅವಲೋಕಿಸಿಕೊಂಡು ಮುಂದಿನ ಪ್ರಗತಿಯ ಬಗ್ಗೆ ನಿರ್ಣಯ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಪರೀಕ್ಷಾಂಗ ಸಾ.ಸ.1:17(2021) |
| **ವಿಷಯ:** | ಕೋವಿಡ್–19ರ ಹಿನ್ನೆಲೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಬೇಕಾಗಿದ್ದ ಪರೀಕ್ಷೆಗಳಿಗೆ ಸಂಬಂಧಿಸಿ, ಕೈಗೊಂಡಿರುವ ಕ್ರಮಗಳ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಪರೀಕ್ಷಾಂಗ ಸಾ.ಸ.1:18(2021) |
| **ವಿಷಯ:** | ಫೆಬ್ರವರಿ/ಸೆಪ್ಟೆಂಬರ್/ಅಕ್ಟೋಬರ್ 2020ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ. |
| **ನಿರ್ಣಯ:** | ಪರೀಕ್ಷಾ ಅವ್ಯವಹಾರ ತನಿಖಾ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಹವಿ ಸಾ.ಸ.1:19(2021) |
| **ವಿಷಯ:** | 2019–20ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆಯ ಬಗ್ಗೆ |
| **ನಿರ್ಣಯ:** | ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಹವಿ ಸಾ.ಸ.1:20(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ 2016–17ನೇ ಸಾಲಿನ ಲೆಕ್ಕಪರಿಶೋಧನ ವರದಿ – ಅನುಸರಣಾ ವರದಿಯ ಅನುಮೋದನೆ ಕುರಿತು |
| **ನಿರ್ಣಯ:** | ಅನುಸರಣಾ ವರದಿಯನ್ನು ಅನುಮೋದಿಸಲಾಯಿತು. ನಗದು ಪುಸ್ತಕಗಳ ನಿರ್ವಹಣೆಗೆ ಸಂಬಂಧಿಸಿ ಸಿಬ್ಬಂದಿಗಳಿಗೆ ಸೂಕ್ತ ತರಬೇತಿಗಳನ್ನು ನೀಡಿದಲ್ಲಿ ಮುಂಬರುವ ದಿನಗಳಲ್ಲಿ ಇಂತಹ ನ್ಯೂನತೆ / ಆಕ್ಷೇಪಣೆಗಳನ್ನು ತಡೆಗಟ್ಟಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಹವಿ ಸಾ.ಸ.1:21(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ 2012–13 ರಿಂದ 2018–19ರವರೆಗಿನ ಮಹಾಲೇಖಪಾಲರ ಲೆಕ್ಕಪರಿಶೋಧನ ವರದಿಯ ಅನುಸರಣಾ ವರದಿಗೆ ಅನುಮೋದನೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟ್ : ಸಾ.ಸ.1:22(2021) |
| **ವಿಷಯ:** | ಶ್ರೀ ರಮೇಶ ಕೆ., ಸಿಂಡಿಕೇಟ್ ಸದಸ್ಯರು – ಇವರ ಪ್ರಸ್ತಾವನೆ ಬಗ್ಗೆ |

1. ಮಂಗಳೂರು ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿ ಸ್ನಾತಕೋತ್ತರ ಪದವಿ, ಅಂತರ್ ರಾಜ್ಯದ ವಿಶ್ವವಿದ್ಯಾನಿಲಯ ವಿದ್ಯಾರ್ಥಿಗಳಿಗೆ ಸೀಟು ಹೆಚ್ಚಳ ಹಾಗೂ ಪ್ರವೇಶ ಶುಲ್ಕವನ್ನು ಮರು ಪರಿಶೀಲಿಸುವ ಕುರಿತಂತೆ.

ಅ) ಮಂಗಳೂರು ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿ ಸ್ನಾತಕೋತ್ತರ ಪದವಿಯಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ, ಸರ್ಕಾರಿ ಕಾಲೇಜಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಶುಲ್ಕದಲ್ಲಿ ವ್ಯತ್ಯಾಸವಿದ್ದು, ಇದನ್ನು ಸರಿಪಡಿಸಿ ವಿಶ್ವವಿದ್ಯಾನಿಲಯ ಕ್ಯಾಂಪಸ್‌ಗೆ ವಿದ್ಯಾರ್ಥಿಗಳನ್ನು ಹೆಚ್ಚು ಪ್ರವೇಶ ಪಡೆಯುವಂತೆ ಆಕರ್ಷಣೆ ಮಾಡುವುದು.

**ನಿರ್ಣಯ:** ರಾಜ್ಯದ ಇತರೆ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಅಳವಡಿಸಲಾಗಿರುವ ಪ್ರವೇಶಾತಿಗೆ ಸಂಬಂಧಿಸಿ ಶುಲ್ಕಗಳ ತುಲನಾತ್ಮಕ ತಃಖ್ತೆಗಳನ್ನು ತಯಾರಿಸಿ ಶುಲ್ಕ ಪರಿಷ್ಕರಣಾ ಸಮಿತಿ ಸಭೆಯ ಮುಂದೆ ಮಂಡಿಸಿ, ಸದರಿ ಸಮಿತಿ ಸಭೆಗೆ ಶ್ರೀ ರಮೇಶ್ ಕೆ., ಸಿಂಡಿಕೇಟು ಸದಸ್ಯರು ಇವರನ್ನು ವಿಶೇಷ ಆಹ್ವಾನಿತರನ್ನಾಗಿ ಆಹ್ವಾನಿಸಿ ಮಾರ್ಚ್ 2021ರೊಳಗಾಗಿ ಸಭೆಯ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಆ) ಅಂತರ ರಾಜ್ಯದ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದು ಬರುವ ವಿದ್ಯಾರ್ಥಿಗಳ ಪ್ರವೇಶದ ಮಿತಿಯನ್ನು ಹೆಚ್ಚಿಸಲು ಕ್ರಮಕೈಗೊಳ್ಳುವುದು.

**ನಿರ್ಣಯ:** ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾತಿಗೆ ಸಂಬಂಧಿಸಿದ ಚಾಲ್ತಿ ವಿನಿಯಮದಲ್ಲಿರುವ ಅಂಶವನ್ನು ಮಾನ್ಯ ಕುಲಪತಿಯವರು ಸಭೆಯ ಗಮನಕ್ಕೆ ತಂದರು.

ಇ) ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ "Self Financing" ಶುಲ್ಕದ ಕುರಿತಂತೆಯು ಮರು ಪರಿಶೀಲನೆ ಮಾಡಿ ಪ್ರವೇಶಾತಿಗೆ ಒತ್ತು ಕೊಡುವುದು.

**ನಿರ್ಣಯ:** ಶುಲ್ಕ ಪರಿಷ್ಕರಣಾ ಸಮಿತಿ ಸಭೆಯಲ್ಲಿ ಚರ್ಚಿಸಿ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

2. Center for Advanced Research in Environmental Radioactivity (CARER) ವಿಭಾಗವನ್ನು ಉನ್ನತ ದರ್ಜೆಗೇರಿಸಲು Statute ರಚಿಸಿ ಸರ್ಕಾರದಿಂದ ಮಾನ್ಯತೆ ಪಡೆಯುವಂತೆ ಮಾಡಲು ಕ್ರಮಕೈಗೊಳ್ಳುವುದು.

**ನಿರ್ಣಯ:** Prof. Karunakar N., ಸಂಯೋಜಕರು ಇವರು ಮಂಗಳೂರು ವಿಶ್ವವಿದ್ಯಾನಿಲಯದ CARER ನ ಕಾರ್ಯವಿಧಾನವನ್ನು ವಿಸ್ತಾರವಾಗಿ ಸಭೆಗೆ ವಿವರಿಸಿದರು.

**CARER**ಗೆ ಸಂಬಂಧಿಸಿ ತುರ್ತಾಗಿ ಪರಿನಿಯಮವನ್ನು ತಯಾರಿಸಿಕೊಂಡು ವಿಶ್ವವಿದ್ಯಾನಿಲಯದ ವಿವಿಧ ಪ್ರಾಧಿಕಾರಗಳಲ್ಲಿ ಮಂಡಿಸಿ ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ : ಸಾ.ಸ.1:23(2021)

**ವಿಷಯ:** ಶ್ರೀ ರವಿಚಂದ್ರ ಪಿ.ಎಂ., ಸಿಂಡಿಕೇಟ್ ಸದಸ್ಯರು – ಇವರು ಸಲ್ಲಿಸಿರುವ ಪ್ರಸ್ತಾವನೆ ಕುರಿತು.

**ನಿರ್ಣಯ:** ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ : ಸಾ.ಸ.1:24(2021)

**ವಿಷಯ:** ಪ್ರೊ.ಬಿ.ಉದಯ, ಡೀನರು ಹಾಗೂ ಸಿಂಡಿಕೇಟ್ ಸದಸ್ಯರು ಇವರು ಸಲ್ಲಿಸಿರುವ ಪ್ರಸ್ತಾವನೆ ಕುರಿತು : ಸ್ನಾತಕೋತ್ತರ ವಿಭಾಗಗಳಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಒದಗಿಸಬೇಕಾದ ಮೂಲಭೂತ ಸೌಕರ್ಯಗಳ ಹಾಗೂ ಇತರ ಸವಲತ್ತುಗಳ ಬಗ್ಗೆ.

1. ಮಂಗಳೂರು ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ ನಡೆಸಲಾಗುತ್ತಿರುವ ಸ್ನಾತಕೋತ್ತರ ವಿಭಾಗಗಳಲ್ಲಿ ನಡೆಸಬಹುದಾದಂತಹ ಶೈಕ್ಷಣಿಕ ಚಟುವಟಿಕೆಗಳಿಗೆ ಸಂಬಂಧಿಸಿದ ಮೂಲಭೂತ ಸವಲತ್ತುಗಳನ್ನು ವಿಶ್ವವಿದ್ಯಾನಿಲಯದಿಂದ ಒದಗಿಸಿ ಕ್ಯಾಂಪಸ್‌ನಲ್ಲಿ ಶೈಕ್ಷಣಿಕ ವಾತಾವರಣದಲ್ಲಿ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಸಕ್ರಿಯವಾಗಿ ಭಾಗವಹಿಸಲು ಪ್ರೇರಣೆ ಹಾಗೂ ಪ್ರೋತ್ಸಾಹ ನೀಡುವ ಸನ್ನಿವೇಶಗಳನ್ನು ಸೃಷ್ಟಿಸಬೇಕಾದಂತ ಅನಿವಾರ್ಯತೆ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರೋತ್ಸಾಹಿಸುವ ಸಲುವಾಗಿ ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಂದ ಆಧುನಿಕ ಉಪಕರಣಗಳನ್ನು ಬಳಸಿಕೊಂಡು ಪ್ರೊಫೇಸೋರಿಯಲ್ ಲೆಕ್ಚರ್ ಸೀರೀಸ್‌ಗಳನ್ನು ನಡೆಸುವಂತೆ ಸೂಚಿಸಲು ಎಲ್ಲಾ ವಿಭಾಗಗಳಿಗೆ ಸುತ್ತೋಲೆಯನ್ನು ಕಳುಹಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

2. ಕ್ಯಾಂಪಸ್ ನಲ್ಲಿರುವ ಆರೋಗ್ಯ ಕೇಂದ್ರಕ್ಕೆ ಶಿಕ್ಷಕ/ಶಿಕ್ಷಕೇತರ / ವಿದ್ಯಾರ್ಥಿಗಳಿಗೆ ಬೇಕಾಗಿರುವ ಎಲ್ಲಾ ತರಹದ ಔಷಧಗಳನ್ನು ನಿರಂತರವಾಗಿ ಸರಬರಾಜು ಮಾಡುವಲ್ಲಿ ವಿಶ್ವವಿದ್ಯಾನಿಲಯದ ಆಡಳಿತ ಕ್ರಮಕೈಗೊಳ್ಳುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಆವರಣದಲ್ಲಿ **"ಪ್ರಧಾನಮಂತ್ರಿ ಭಾರತೀಯ ಜನೌಷಧಿ ಕೇಂದ್ರ"** ವನ್ನು ಸ್ಥಾಪಿಸಲು ಅಗತ್ಯ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ : ಸಾ.ಸ.1:25(2021)

**ವಿಷಯ:** ಡಾ. ಪಾರ್ವತಿ ಅಪ್ಪಯ್ಯ, ಸಿಂಡಿಕೇಟ್ ಸದಸ್ಯರು – ಇವರು ಸಲ್ಲಿಸಿರುವ ಪ್ರಸ್ತಾವನೆ ಕುರಿತು.

1. To Supply information
   a) relating to development activities related to Field Marshal K .M Cariappa College
   b) name of the members of Development Committee constituted
   c) efforts made to recognize the College as P.G. College and
   d) Steps taken to transfer back the staff who have gone to Mangalore University College / Mangalagangothri .

**ನಿರ್ಣಯ:**

a) ಮಾಹಿತಿಯನ್ನು ವಿಶ್ವವಿದ್ಯಾನಿಲಯದ ಸಂಬಂಧಪಟ್ಟ ವಿಭಾಗಗಳಿಂದ ಕ್ರೋಢೀಕರಿಸಿ ಸದರಿಯವರಿಗೆ ನೀಡಲು ಕ್ರಮ ಕೈಗೊಳ್ಳುವುದು.

b) ಸ್ಥಳೀಯ ವ್ಯಕ್ತಿಗಳನ್ನು ಒಳಗೊಂಡಂತೆ ಕಾಲೇಜು ಅಭಿವೃದ್ಧಿ ಮಂಡಳಿಗೆ ಸದಸ್ಯರುಗಳನ್ನು ನಾಮನಿರ್ದೇಶನ ಮಾಡಲು ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

c) ಈ ಬಗ್ಗೆ ಆಡಳಿತಾತ್ಮಕ ಕ್ರಮ ಕೈಗೊಳ್ಳವುದು.

d) ಘಟಕ ಕಾಲೇಜುಗಳ ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದ ಸಮಿತಿ ಸಭೆಯ ವರದಿಯ ಆಧಾರದ ಮೇಲೆ ಕ್ರಮಕೈಗೊಳ್ಳಲಾಗುವುದಾಗಿ ತಿಳಿಸಲಾಯಿತು.

2. Many new departments started in the Constituent Colleges of Mangalore University required to be recognized by the government and permanent staff need to be appointed. Whether efforts are made in this direction?

**ನಿರ್ಣಯ:** ಸರಕಾರದಿಂದ ಅನುಮತಿ ದೊರೆತ ಕೂಡಲೇ ಈ ಬಗ್ಗೆ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

3. Alumni association of FMKMCC has only around 600 members so far even though the College was established in 1949. Kindly permit the alumni association to enroll outgoing students each year as the members of the association through the College.

**ನಿರ್ಣಯ:** ಕಾಲೇಜಿನಲ್ಲಿ ಅಸ್ತಿತ್ವದಲ್ಲಿರುವ Alumni association ಸಭೆಯಲ್ಲಿ ಸದರಿ ವಿಷಯದ ಬಗ್ಗೆ ಚರ್ಚಿಸಿ ಸೂಕ್ತ ನಿರ್ಣಯ ಕೈಗೊಳ್ಳಬಹುದೆಂಬುದಾಗಿ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.1:26(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ದೂರ ಶಿಕ್ಷಣ ಕಾರ್ಯಕ್ರಮವನ್ನು ಮುಂದುವರಿಸುವ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ದೂರ ಶಿಕ್ಷಣ ಕಾರ್ಯಕ್ರಮವನ್ನು ಮುಂದುವರಿಸುವ ಬಗ್ಗೆ ಸಭೆಯಲ್ಲಿ ಸುಧೀರ್ಘವಾಗಿ ಚರ್ಚಿಸಲಾಯಿತು. ಯುಜಿಸಿಯ Public Notice F.No. 1-15/2020 (DEB-I) dtd. 12th October 2020 ರಲ್ಲಿ ಶೈಕ್ಷಣಿಕ ವರ್ಷ 2020–21ನೇ ಸಾಲಿಗೆ ODL ಮೂಲಕ ನಡೆಸಲ್ಪಡುತ್ತಿರುವ ಕಾರ್ಯಕ್ರಮಗಳನ್ನು ಮುಂದುವರಿಸಲು ಅನುಮತಿ ನೀಡಿರುವುದರಿಂದ ಪ್ರಸ್ತುತ ಮಂಗಳೂರು ವಿಶ್ವವಿದ್ಯಾನಿಲಯದಿಂದ ನಡೆಸಲ್ಪಡುತ್ತಿರುವ B.Ed.(ODL) ಕಾರ್ಯಕ್ರಮವನ್ನು ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮುಂದುವರಿದು, ವಿಶ್ವವಿದ್ಯಾನಿಲಯದ ದೂರ ಶಿಕ್ಷಣ ಕೇಂದ್ರದ ಮುಖಾಂತರ ನಡೆಸಲ್ಪಡುವ ಪದವಿ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ನ್ಯಾಯವಾದಿಯವರ ಅಭಿಪ್ರಾಯದನುಸಾರ ನ್ಯಾಯಾಲಯದಲ್ಲಿ ದಾವೆ ಹೂಡಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾ.ಸ.1:27(2021)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣ, ಮಂಗಳಗಂಗೋತ್ರಿ, ಘಟಕ ಕಾಲೇಜುಗಳು ಹಾಗೂ ಜ್ಞಾನ ಕಾವೇರಿ, ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಮುಂತಾದ ಕಡೆಗಳಲ್ಲಿ ಭದ್ರತೆ, ಶುಚಿತ್ವ 'ಡಿ' ಗ್ರೂಪ್, ತೋಟಗಾರಿಕೆ

|  |  |
| --- | --- |
|  | ಮುಂತಾದವುಗಳ ನಿರ್ವಹಣೆಗೆ ಮಾನವ ಸೇವೆಗಳನ್ನು ಸರಬರಾಜು ಮಾಡುವ ಗುತ್ತಿಗೆ ಸಂಸ್ಥೆಯ ಅವಧಿಯು ದಿನಾಂಕ 31.01.2021ಕ್ಕೆ ಮುಕ್ತಾಯಗೊಳ್ಳಲಿರುವುದರಿಂದ, ಇ–ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ, ಗುತ್ತಿಗೆ ಅವಧಿ ವಿಸ್ತರಣೆ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಪ್ರಸ್ತುತ ಇ–ಟೆಂಡರ್ ಪ್ರಕ್ರಿಯೆಗೆ ಸಮಯಾವಕಾಶದ ಅಗತ್ಯವಿರುವುದರಿಂದ ದಿನಾಂಕ 31.03.2021ರವರೆಗೆ ಈ ಹಿಂದೆ ಮಂಜೂರಾದ ದರ ಮತ್ತು ಷರತ್ತಿನೊಂದಿಗೆ ಹಾಲಿ ಗುತ್ತಿಗೆದಾರರಾದ M/s Sri Ranganatha Enterprises, Mysore ಇವರಿಗೆ ಗುತ್ತಿಗೆಯನ್ನು ಮುಂದುವರಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ ಸಾ.ಸ.1:28(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ ಕಾಜವ ಪ್ಲೇಸ್ ವಸತಿನಿಲಯಕ್ಕೆ ವಿಶ್ವವಿದ್ಯಾನಿಲಯವು ನೀಡಿದ ಭದ್ರತಾ ಠೇವಣಿ ರೂ.3,89,400.00 ಮೊತ್ತದಿಂದ, ಪಾವತಿಗೆ ಬಾಕಿ ಇರುವ ಲೈಸೆನ್ಸ್ ಫೀ ರೂ.2,90,272.00ನ್ನು ಕಡಿತಗೊಳಿಸಿ, ರೂ.99,128.00ನ್ನು ಕಟ್ಟಡದ ಮಾಲೀಕರಿಂದ ಪಡಕೊಳ್ಳುವ ಬಗ್ಗೆ. |
| **ನಿರ್ಣಯ:** | ವಿಶ್ವವಿದ್ಯಾನಿಲಯದಿಂದ ಪಾವತಿಗೆ ಬಾಕಿಯಿರುವ ಲೈಸೆನ್ಸ್ ಫೀಯನ್ನು ಭದ್ರತಾ ಠೇವಣಿ ಮೊತ್ತದಿಂದ ಕಡಿತಗೊಳಿಸಿ, ಉಳಿಕೆ ಮೊತ್ತ ರೂ.99,128.00 (ರೂಪಾಯಿ ತೊಂಬತ್ತೊಂಬತ್ತು ಸಾವಿರದ ಒಂದು ನೂರ ಇಪ್ಪತ್ತೆಂಟು ಮಾತ್ರ) ವನ್ನು ಕಟ್ಟಡ ಮಾಲೀಕರಿಂದ ಹಿಂಪಡೆಯಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ ಸಾ.ಸ.1:29(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಜಾಹೀರಾತು ಹೊಸ ದಿಗಂತ ಪತ್ರಿಕೆಯಲ್ಲಿ ಪ್ರಕಟವಾಗಿರುವುದಕ್ಕೆ ಜಾಹೀರಾತು ವೆಚ್ಚ ಪಾವತಿಸಲು ಅನುಮೋದನೆ ನೀಡುವ ಬಗ್ಗೆ |
| **ನಿರ್ಣಯ:** | ಈಗಾಗಲೇ ಪಾವತಿಸಿರುವ ಜಾಹಿರಾತು ವೆಚ್ಚ ರೂ.5,00,000.00 (ರೂಪಾಯಿ ಐದು ಲಕ್ಷಗಳು ಮಾತ್ರ)ದ ಬಿಲ್ಲಿನ ಪಾವತಿಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ ಸಾ.ಸ.1:30(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ ಎ.ಎಸ್.ಕೆ. ಟವರ್ಸ್, ನಾಟೆಕಲ್ ಅಲ್ಲಿನ 8 ಫ್ಲಾಟ್‌ಗಳ ಪರವಾನಗಿ ಅವಧಿ ಮುಗಿದಿದ್ದು, ಮುಂದಿನ 11 ತಿಂಗಳ ಅವಧಿಗೆ ಪರವಾನಗಿಯನ್ನು ಮುಂದುವರಿಸುವ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ ಸಾ.ಸ.1:31(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ |

| | |
|---|---|
| | ವೆಂಕಟ್ ರೆಸಿಡೆನ್ಸಿ ವಸತಿನಿಲಯದ ಬಾಕಿ ಉಳಿದಿರುವ ಲೈಸೆನ್ಸ್ ಫೀ ಪಾವತಿ ಮಾಡುವ ಬಗ್ಗೆ ಹಾಗೂ ಮುಂದಿನ 11 ತಿಂಗಳ ಅವಧಿಗೆ ಪರವಾನಗಿಯನ್ನು ವಿಸ್ತರಿಸುವ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ ಸಾ.ಸ.1:32(2021) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಲಿಂಗ ಸಮಾನತೆ ಕುರಿತು ಕಾರ್ಯನೀತಿ ರೂಪಿಸುವ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ತಿದ್ದುಪಡಿಯೊಂದಿಗೆ ಅನುಮೋದಿಸಲಾಯಿತು. |

**ಇತರ ವಿಷಯಗಳು:**

1. ಸಿಂಡಿಕೇಟು ಸಭೆಗಳ ನಿರ್ಣಯದ ಮೇಲೆ ತೆಗೆದುಕೊಳ್ಳುವ ಕ್ರಮಗಳನ್ನು ಅನುಸರಣಾ ವರದಿಯಲ್ಲಿ ನೀಡುವಾಗ ಕಾರ್ಯಸೂಚಿ/ವಿಷಯಗಳ ನಿರ್ಣಯಗಳಿಗೆ ಕೈಗೊಂಡಿರುವ ಕ್ರಮಗಳನ್ನು ಸ್ಪಷ್ಟವಾಗಿ ತಿಳಿಸಿ, ಸಂಬಂಧಿತ ಪತ್ರಸಂಖ್ಯೆ ಮತ್ತು ದಿನಾಂಕದೊಂದಿಗೆ ನಮೂದಿಸುವುದು.

2. ಡಾ. ಉದಯಕುಮಾರ್ ಎಂ.ಎ., ನಿಕಟಪೂರ್ವ ಪ್ರಭಾರ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರು ತಮ್ಮ ಫೇಸ್ ಬುಕ್ ಖಾತೆಯಲ್ಲಿ ವಿಶ್ವವಿದ್ಯಾನಿಲಯದ ಗೌರವಕ್ಕೆ ಚ್ಯುತಿ ತರುವಂತೆ ಹಂಚಿಕೊಂಡಿರುವ ಹೇಳಿಕೆಗಳಿಗೆ ಸಂಬಂಧಿಸಿ, ಸದರಿಯವರ ಮೇಲೆ ಸೂಕ್ತ ಶಿಸ್ತುಕ್ರಮ ಕೈಗೊಳ್ಳಬೇಕೆಂದು ಸಿಂಡಿಕೇಟು ನಿರ್ಣಯಿಸಿತು.

3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ಲೆಕ್ಕ ಪರಿಶೋಧನಾ ಆಕ್ಷೇಪಣೆಗಳಿಗೆ ಸಂಬಂಧಿಸಿ, ಸದರಿ ಆಕ್ಷೇಪಣೆಗಳ ಪರಿಶೀಲನೆಗಾಗಿ ಸಿಂಡಿಕೇಟು ಸದಸ್ಯರಾದ ಶ್ರೀ ಮೋಹನ್ ಪಡಿವಾಳ್ ಇವರ ಅಧ್ಯಕ್ಷತೆಯಲ್ಲಿ, ಹಣಕಾಸು ಅಧಿಕಾರಿಯವರನ್ನು ಸಂಯೋಜಕರನ್ನಾಗಿ ನೇಮಿಸಿ, ಎಲ್ಲಾ ಲೆಕ್ಕಪರಿಶೋಧಕರನ್ನೊಳಗೊಂಡ ಸಮಿತಿ ಸಭೆಯನ್ನು ಶೀಘ್ರದಲ್ಲಿ ನಡೆಸಿ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವುದು.

4. ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ರವೀಂದ್ರ ಕಲಾ ಭವನದ ಕಾಮಗಾರಿಯನ್ನು ನಿರ್ಮಿತಿ ಕೇಂದ್ರಕ್ಕೆ ವಹಿಸಿದ ಮತ್ತು ಖರ್ಚುವೆಚ್ಚಗಳ ವಿವರಗಳನ್ನು ಸಂಪೂರ್ಣವಾಗಿ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

5. ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಳಲ್ಲಿ ನಡೆಸಲಾಗುವ ಸಭೆಗಳ ದಿನಾಂಕ ಮತ್ತು ಸಮಯದ ಮಾಹಿತಿಯನ್ನು ಕ್ಲಪ್ತ ಸಮಯದಲ್ಲಿ ಸಂಬಂಧಿತ ಸಮಿತಿಗಳ ಅಧ್ಯಕ್ಷರು, ಸದಸ್ಯರು ಮತ್ತು ಇತರರಿಗೆ ನೀಡುವಂತೆ ಸೂಚಿಸಲು ನಿರ್ಣಯಿಸಲಾಯಿತು. ಕಾರಣಾಂತರಗಳಿಂದ ಸಭೆಯು ಮುಂದೂಡಲ್ಪಟ್ಟರೆ ಮಾಹಿತಿಯನ್ನು ಸಂಬಂಧಪಟ್ಟವರಿಗೆ ಕೂಡಲೇ ತಿಳಿಸುವುದು. ತಪ್ಪಿದಲ್ಲಿ ಸಂಬಂಧಪಟ್ಟವರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

6. ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಡೀನರ

ಪದಬಳಕೆಯಾಗುತ್ತಿರುವುದು ವಿಶ್ವವಿದ್ಯಾನಿಲಯದ ಗಮನಕ್ಕೆ ಬಂದಿರುತ್ತದೆ. ಸಿಂಡಿಕೇಟು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿತು. ವಿಶ್ವವಿದ್ಯಾನಿಲಯದ ವಿವಿಧ ನಿಕಾಯಗಳಿಗೆ ಸಂಬಂಧಿಸಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ದ ಪ್ರಕಾರ ಡೀನರುಗಳನ್ನು ನೇಮಕಾತಿ ಮಾಡಲಾಗುತ್ತಿದೆ. ಅದರ ಹೊರತಾಗಿ ಯಾವುದೇ ಘಟಕ ಅಥವಾ ಸಂಯೋಜಿತ ಕಾಲೇಜುಗಳಲ್ಲಿ ಡೀನರ ಪದಬಳಕೆ ಸಮಂಜಂಸವಲ್ಲವೆಂದು ತೀರ್ಮಾನಿಸಿ, ಈ ಬಗ್ಗೆ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳಿಗೆ ಸುತ್ತೋಲೆಯನ್ನು ಕಳುಹಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

7. 08, 09, 10 ಫೆಬ್ರವರಿ 2021ರಂದು ವಿಶ್ವವಿದ್ಯಾನಿಲಯಕ್ಕೆ NAAC ಸಮಿತಿಯು ಭೇಟಿ ನೀಡಲಿರುವ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಈ ಸಂದರ್ಭದಲ್ಲಿ ಎಲ್ಲಾ ಸಿಂಡಿಕೇಟು ಸದಸ್ಯರು ನಿಗದಿಪಡಿಸಿದ ದಿನಾಂಕದಂದು ಹಾಜರಿರಬೇಕೆಂದು ಮಾನ್ಯ ಸಿಂಡಿಕೇಟು ಸದಸ್ಯರುಗಳಲ್ಲಿ ವಿನಂತಿಸಿದರು.

8. ವಿಶ್ವವಿದ್ಯಾನಿಲಯದಿಂದ ನೀಡಲಾಗುವ ಗೌರವ ಡಾಕ್ಟರೇಟ್ ಪದವಿಗೆ ಸಂಬಂಧಿಸಿ, ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಸಿಂಡಿಕೇಟು ಪರಿಶೀಲಿಸಿತು. ಸದರಿ ಅರ್ಜಿಗಳ ಪೈಕಿ ವಿವಿಧ ಕ್ಷೇತ್ರಗಳಿಂದ ಅರ್ಹರಾದ 10 ವ್ಯಕ್ತಿಗಳನ್ನು ಆರಿಸಿ, ಈ ಬಗ್ಗೆ ಮುಂದಿನ ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಗೌರವ ಡಾಕ್ಟರೇಟ್ ಪದವಿಗೆ ಸಂಬಂಧಿಸಿ, ರಚಿಸಲಾಗವ ತಜ್ಞರ ಸಮಿತಿಗೆ ಓರ್ವ ಕುಲಪತಿಗಳ ಹೆಸರನ್ನು ಮಂಗಳೂರು ವಿಶ್ವವಿದ್ಯಾನಿಲಯದ ಪ್ರತಿನಿಧಿಯಾಗಿ ಸಿಂಡಿಕೇಟು ಸರ್ವಾನುಮತದಿಂದ ನಾಮನಿರ್ದೇಶನ ಮಾಡಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು. |